ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಮಸೀದಿಗಳ ಧಾರ್ಮಿಕ ಗುರುಗಳ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು) -

45 (38) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಮಸೀದಿಗಳಲ್ಲಿ ಧಾರ್ಮಿಕ ಗುರುಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಅನ್ಯದೇಶದ/ಹೊರ ರಾಜ್ಯದ ಮೌಲ್ವಿ/ ಪೇಷುಮಾಮ್ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಮಸೀದಿಗಳಲ್ಲಿ ಪ್ರಸ್ತುತ ಇರುವ ರೋಹಿಂಗ್ಯ/ಬಾಂಗ್ಲಾದೇಶಿ ಮುಸ್ಲಿಂಮರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಮಸೀದಿಗಳಿಂದ ಸರ್ಕಾರಕ್ಕೆ ಸಂಗ್ರಹವಾಗುವ ತೆರಿಗೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮಸೀದಿಗಳಲ್ಲಿ ಹೊರ ರಾಜ್ಯ ಮತ್ತು ಹೊರ ದೇಶದಿಂದ ಬರುವ ಮುಸ್ಲಿಂಮರಿಗೆ ವಾಸ್ತವ್ಯಕ್ಕೆ ಅವಕಾಶ ಇದೆಯೇ; ಮಸೀದಿಗಳನ್ನು ಗೆಸ್ಟ್ ಹೌಸ್ ರೀತಿಯಲ್ಲಿ ಬಳಸಬಹುದೇ; ಈ ರೀತಿಯ ಅಕ್ರಮ ವಾಸ್ತವ್ಯದಿಂದ ಮಸೀದಿಗಳು ಕಾನೂನು ಬಾಹಿರ ಕೃತ್ಯಗಳಿಗೆ ಬಳಕೆಯಾಗುತ್ತಿರುವ ಕುರಿತು ಸರ್ಕಾರದ ನಿಲುವೇನು?